ಆ) ಹಾಗಿದ್ದಲ್ಲಿ ಎಷ್ಟು ಸಮಯದೊಳಗೆ ಈ ಕೆಲಸವನ್ನು ಪ್ರಾರಂಭಿಸಲಾಗುವುದು?

ಶ್ರೀ ಅಬ್ದುಲ್ ನಜೀರ್ ಸಾಬ್ (ಗ್ರಾಮಾಭಿವೃದ್ಧಿ, ವಸತಿ ಮತ್ತು ವಕ್ಫ್ ಮಂತ್ರಿಗಳು).—

ಅ) ಧರ್ಮಸ್ಥಳಕ್ಕೆ ರಾಷ್ಟ್ರೀಯ ಗ್ರಾಮೀಣ (ಅಭಿವೃದ್ಧಿ) ನೀರು ಸರಬರಾಜು ಯೋಜನೆಯನ್ನು ದಿನಾಂಕ ೩೧-೩-೧೯೮೫ರಲ್ಲಿ ರೂ. ೧೨.೮೬ ಲಕ್ಷಕ್ಕೆ ಮಂಜೂರಾತಿ ನೀಡಲಾಗಿದೆ.

ಈ ಯೋಜನೆಯ ಕಾಮಗಾರಿಗಳನ್ನು ಏಪ್ರಿಲ್ ೮೬ರಲ್ಲಿ ಪ್ರಾರಂಭಿಸಲಾಗಿದೆ.

ಆ) ನೇಲಿನ ಉತ್ತರದಿಂದ ಈ ಪ್ರಶ್ನೆಯು ಉದ್ಭವಿಸುವುದಿಲ್ಲ.

ಪುರ ಸಭೆಯಂ ಸಮಂಗ್ರ ಕಾನೂನು ತಿದ್ದು ಪಡಿ ಮಾಡುವ ಬಗ್ಗೆ

೫೭೮. ಶ್ರೀ ಸಿ. ಎಂ. ಉದಾಸಿ (ಹಾನಗಲ್).—ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದ ಪುರಸಭೆಗಳ ಬಗ್ಗೆ ಸಮಂಗ್ರ ಕಾನೂನು ತಿದ್ದುಪಡಿ ಮಾಡುವ ಸಲಹೆ ಸರ್ಕಾರದವರ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ, ಯಾವಾಗ ಮಾಡಲಾಗುವುದು?

ಶ್ರೀ ಎ. ಲಕ್ಷ್ಮಿಸಾಗರ್ (ನಗರಾಭಿವೃದ್ಧಿ ಕಾನೂನು, ಸಂಸದೀಯ ವ್ಯವಹಾರಗಳ ಮಂತ್ರಿಗಳು).—

ಅ) ಹೌದು.

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ಹಾನಗಲ್ ಪಟ್ಟಣದಲ್ಲಿ ಗೃಹ ನಿರ್ಮಾಣಕ್ಕಾಗಿ ನಿವೇಶನಗಳನ್ನು ಸ್ವಾಧೀನ ಪಡಿಸಿಕೊಳ್ಳುವ ಬಗ್ಗೆ.

೫೮೦. ಶ್ರೀ ಸಿ. ಎಂ. ಉದಾಸಿ (ಹಾನಗಲ್) —ಮಾನ್ಯ ವಸತಿ, ಪಂಚಾಯತ್ ರಾಜ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹಾನಗಲ್ ಪಟ್ಟಣದಲ್ಲಿ ಗೃಹ ನಿರ್ಮಾಣಕ್ಕಾಗಿ ನಿವೇಶನಗಳನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆಯೇ?

ಆ) ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣವೇನು? , ಹಾಗೂ ಯಾವಾಗ ಸ್ವಾಧೀನ ಪಡಿಸಿಕೊಳ್ಳಲಾಗುವುದು.

ಶ್ರೀ ಅಬ್ದುಲ್ ನಜೀರ್ ಸಾಬ್ (ವಸತಿ, ಪಂಚಾಯತ್ ರಾಜ್ ಮಂತ್ರಿಗಳು).—

ಅ) ಇಲ್ಲ

ಆ) ಸೂಕ್ತ ಜಮೀನನ್ನು ಗುರುತಿಸಿ ಭೂ ಸ್ವಾಧೀನಕ್ಕೆ ಕ್ರಮ ಒದಗಿಸಲು ಕಾರ್ಯಪಾಲಕ ಅಭಿಯಂತರರಿಗೆ ಆದೇಶಿಸಿದೆ. ಭೂ ಸ್ವಾಧೀನ ಶೀಘ್ರದಲ್ಲೇ ಮಾಡಲಾಗುವುದು.

ಬೆಳ್ತಂಗಡಿ ತಾಲ್ಲೂಕಿನ ಸಮಗ್ರ ಗ್ರಾಮೀಣ ಅಭಿವೃದ್ಧಿ ಯೋಜನೆ ಬಗ್ಗೆ.

೪೧೬. ಶ್ರೀ ಕೆ. ವಸಂತ ಬಂಗೇರ. (ಬೆಳ್ತಂಗಡಿ).—ಮಾನ್ಯ ಗ್ರಾಮೀಣಾಭಿವೃದ್ಧಿ, ವಸತಿ ಮಂತ್ರಿ ಮತ್ತು ವಕ್ಫ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿ ಸರಕಾರದವರು ಮಾಡಬೇಕಾದಂತಹ ಸಮಗ್ರ ಗ್ರಾಮೀಣ ಅಭಿವೃದ್ಧಿ ಯೋಜನೆಯನ್ನು ಧರ್ಮಸ್ಥಳದ ಧರ್ಮಾಧಿಕಾರಿ ನಡೆಸುತ್ತಿರುವ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೇ?

ಆ) ಇಡೀ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ ವಿಸ್ತರಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?